ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣಗಳು ಬಾಕಿ ಇರುವುದರಿಂದ, ಅಧ್ಯಕ್ಷರು/ಸದಸ್ಯರುಗಳ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಕೈಗೊಂಡಿರುವುದಿಲ್ಲ.

ಶ್ರೀ ಕೆ.ಜಿ. ಬೋಪಯ್ಯ:– ಈ Consumer forum ನಲ್ಲಿ ಅಧ್ಯಕ್ಷರು ಮತ್ತು ಸದಸ್ಯರುಗಳು ಇಲ್ಲವೆಂದು ಹೇಳಿರುವುದಕ್ಕೆ ಮಾನ್ಯ ಸಚಿವರು ಉತ್ತರವನ್ನು ಕೊಟ್ಟಿದ್ದಾರೆ. ಆದರೆ ಯಾರೋ review petition ಹಾಕಿದ್ದಾರೆ. ಅದು ನಿಮಗೆ ಗೊತ್ತಿದೆ, ಅದು hearing ಗೆ ಬರುವುದಿಲ್ಲ. ನೀವು process ಮಾಡಬಹುದು.

ಶ್ರೀ ಟಿ.ಬಿ. ಜಯಚಂದ್ರ:– ಮಾನ್ಯ ಅಧ್ಯಕ್ಷರೆ, ಇದು ನನ್ನ ಇಲಾಖೆಗೂ ಸ್ವಲ್ಪ ಸಂಬಂಧಿಸಿದೆ, ಆದರೆ ಇದು ಆಹಾರ ಇಲಾಖೆಯ ವ್ಯಾಪ್ತಿಗೆ ಬರುತ್ತದೆ. ಇದು ನನ್ನ ಗಮನಕ್ಕೂ ಕೂಡ ಬಂದಿದೆ. ಇದಕ್ಕೆ ನೇಮಕಾತಿ ಪ್ರಕ್ರಿಯೆಗೆ ಚಾಲನೆ ಕೊಡುವುದಕ್ಕೆ ಕ್ರಮ ಕೈಗೊಳ್ಳುತ್ತೇವೆ.

ಅಧ್ಯಕ್ಷರು:– ಆಯಿತು. ಸಿ.ಟಿ. ರವಿಯವರು, ಇಲ್ಲ. ಶ್ರೀ ಬಿ.ಎನ್. ವಿಜಯಕುಮಾರ್ ಇಲ್ಲ. ಮಾನ್ಯ ಹೆಚ್.ಕೆ. ಕುಮಾರಸ್ವಾಮಿಯವರೆ ತಾವು ಕೇಳಿ.

4. ವಿಷಯ: ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ಹಾನಬಾಳ್ ಗ್ರಾಮದಲ್ಲಿ ಕೈಗೊಂಡಿರುವ ಅಗಸಿ ಕುಡಿಯುವ ನೀರು ಯೋಜನೆಯ ಕಾಮಗಾರಿಯು ಕಳಪೆಯಿಂದ ಕೂಡಿದ್ದು ಈ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ:

ಶ್ರೀ ಹೆಚ್.ಕೆ. ಕುಮಾರಸ್ವಾಮಿ (ಸಕಲೇಶಪುರ):– ಮಾನ್ಯ ಅಧ್ಯಕ್ಷರೆ, ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ಹಾನಬಾಳ್ ಗ್ರಾಮದಲ್ಲಿ ಕೈಗೊಂಡಿರುವ ಅಗಸಿ ಕುಡಿಯುವ ನೀರು ಯೋಜನೆಯ ಕಾಮಗಾರಿಯು ಕಳಪೆಯಿಂದ ಕೂಡಿದ್ದು ಈ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯಬಯಸುತ್ತೇನೆ.